ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

27

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 28/1/21

# ರಾಜ್ಯ ವಿಧಾನಮಂಡಲ ಕಲಾಪ ಇಂದಿನಿಂದ

## ಗೋಹತ್ಯೆ ನಿಷೇಧ ಸೇರಿ 11 ವಿಧೇಯಕ ಮಂಡನೆ

## ಇಂದು ಜಂಟಿ ಕಲಾಪ ಉದ್ದೇಶಿಸಿ ಗೌರ್ನರ್ ಭಾಷಣ

## ಖಾತೆ ಹಂಚಿಕೆ, ರೈತ ಹೋರಾಟ ಬಗ್ಗೆ ಜಟಾಪಟಿ?

• **ಕನ್ನಡಪ್ರಭ ವಾರ್ತೆ** ಬೆಂಗಳೂರು 28/1/21

ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನ ಗುರುವಾರದಿಂದ ಆರಂಭವಾಗಲಿದ್ದು, ಕೃಷಿ ಕಾಯ್ದೆಗಳ ತಿದ್ದುಪಡಿ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟ, ಇತ್ತೀಚಿನ ಖಾತೆ ಹಂಚಿಕೆ ಗೊಂದಲ, ನಾಯಕತ್ವ ಬದಲಾವಣೆಯ ವದಂತಿ, ವಿಧಾನಪರಿಷತ್ತಿನ ಸಭಾಪತಿ ವಿರುದ್ಧದ ಅವಿಶ್ವಾಸ ನಿರ್ಣಯ ಸೇರಿದಂತೆ ಪ್ರಸಕ್ತ ಬೆಳವಣಿಗೆಗಳ ಬಗ್ಗೆ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಜಟಾಪಟಿಗೆ ವೇದಿಕೆ ಸಜ್ಜಾಗಿದೆ.



ಗುರುವಾರ ಬೆಳಗ್ಗೆ 11 ಗಂಟೆಗೆ ರಾಜ್ಯಪಾಲ ವಜುಭಾಯಿ ವಾಲಾ ಅವರು ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಇತ್ತೀಚೆಗೆ ಅಗಲಿದ ವಿಧಾನಪರಿಷ್‌ನ ಉಪಸಭಾಪತಿ ಧರ್ಮೇಗೌಡ ಸೇರಿದಂತೆ ಮಾಜಿ ಶಾಸಕರು ಮತ್ತು ಗಣ್ಯರಿಗೆ ಸಂತಾಪ ಸೂಚನೆ ನಿರ್ಣಯ ಕೈಗೊಳ್ಳಲಾಗುತ್ತದೆ. ನಂತರ ಸದನವನ್ನು ಶುಕ್ರವಾರಕ್ಕೆ ಮುಂದೂಡಲಾಗುತ್ತದೆ.

ಜಂಟಿ ಅಧಿವೇಶನದಲ್ಲಿ 11 ವಿಧೇಯಕಗಳು ಮಂಡನೆಯಾಗಲಿದೆ.

›› 9

# ಇಂದಿನಿಂದ ಕಲಾಪ

↙ 3ನೇ ಪುಟದಿಂದ ಕ-ಪ್ರ 28/1/21

ಗೋಹತ್ಯೆ ನಿಷೇಧ ಕಾಯ್ದೆ ಸುಗ್ರೀವಾಜ್ಞೆ ಹೊರಡಿಸಲಾಗಿದ್ದು, ಈ ವಿಧೇಯಕವು ಸಹ ಮಂಡನೆಯಾಗುವ ಸಾಧ್ಯತೆ ಇದೆ. ಅಲ್ಲದೇ, ಪ್ರಶ್ನೋತ್ತರ ಕಲಾಪ ಸೇರಿದಂತೆ ವಿವಿಧ ವಿಚಾರಗಳ ಚರ್ಚೆಗೆ ಅವಕಾಶ ಕಲ್ಪಿಸಲಾಗುತ್ತದೆ. ಫೆ.5ರವರೆಗೆ ಕಲಾಪ ನಡೆಯಲಿದೆ.

ಅಧಿವೇಶನದ ಹಿನ್ನೆಲೆಯಲ್ಲಿ ವಿಧಾನಸಭೆಯ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಬುಧವಾರ ಸಿದ್ಧತೆ ಕುರಿತು ಪರಿಶೀಲನೆ ನಡೆಸಿದರು. ಕೋವಿಡ್ ಹಿನ್ನೆಲೆಯಲ್ಲಿ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆಯೂ ವೀಕ್ಷಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಮಂಡನೆ ಮಾಡಲು ಉದ್ದೇಶಿಸಿರುವ ವಿಧೇಯಕಗಳ ಪ್ರತಿಯನ್ನು ಆದಷ್ಟು ಬೇಗ ಸದನಕ್ಕೆ ಮತ್ತು ಸದಸ್ಯರಿಗೆ ನೀಡಬೇಕು. ಇದರಿಂದ ಸದಸ್ಯರು ಅಧ್ಯಯನ ನಡೆಸಿ ಚರ್ಚೆ ನಡೆಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

**ಸಾರ್ವಜನಿಕರಿಗೆ ಪ್ರವೇಶವಿಲ್ಲ:** ಕೋವಿಡ್ ಹಿನ್ನೆಲೆಯಲ್ಲಿ ಈ ಹಿಂದಿನಂತೆ ಈ ಬಾರಿಯೂ ಕ್ರಮ ಜರುಗಿಸಲಾಗಿದೆ. ಸಾರ್ವಜನಿಕರಿಗೆ ಅಧಿವೇಶನ ವೀಕ್ಷಿಸಲು ಅವಕಾಶ ಇರುವುದಿಲ್ಲ.